ಕ್ರ ಸಂ.	ಜಿಲ್ಲೆ	ತಾಲ್ಲೂಕು	ಮೈಕ್ರೋ ಫೀಡರ್ ಪ್ರಾಂಚೈಸಿಗಳ ಸಂಖ್ಯೆ
1	ಶಿವಮೊಗ್ಗ	ಭದ್ರಾವತಿ	32
2		ಶಿಕಾರಿಪುರ	28
3		ಸೊರಬ	31
4	ಚಿಕ್ಕಮಗಳೂರು	ಚಿಕ್ಕಮಗಳೂರು	2
5		ಕಡೂರು	44
6		ತರೀಕೆರೆ	34
ಒಟ್ಟು			171

ಆ) ಮೈಕ್ರೋ ಫೀಡರ್ ಪ್ರಾಂಚೈಸಿಗಳು ಸಂಬಂಧಿತ ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ವಾಸಿಸುವವರಾಗಿದ್ದು, ಕನಿಷ್ಠ ವಯೋಮಿತಿ 18 ವರ್ಷ ಮತ್ತು ಎಸ್.ಎಸ್.ಎಲ್.ಸಿ/ ಪಿ.ಯು.ಸಿ ಹಾಗೂ ಐ.ಟಿ.ಸಿ/ಐ.ಟಿ.ಐ. ಪರೀಕ್ಷೆಗಳಲ್ಲಿ ಉತ್ತೀರ್ಣರಾದವರಿಗೆ ಆದ್ಯತೆ ನೀಡಿ ಕಳೆದ ಒಂದು ವರ್ಷದ ಕಂದಾಯ ವಸೂಲಿಯ ಸರಾಸರಿ ಆಧಾರದ ಮೇಲೆ ಒಂದು ತಿಂಗಳ ಮೊತ್ತವನ್ನು ಬ್ಯಾಂಕ್ ಗ್ಯಾರಂಟಿ ರೂಪದಲ್ಲಿ ಪ್ರಾಂಚೈಸಿಯವರಿಂದ ಠೇವಣಿ ಪಡೆದುಕೊಂಡು ನಿಯುಕ್ತಿಗೊಳಿಸಲಾಗಿದೆ.

ಇ) ಈ ಪ್ರಸ್ತಾವನೆಯು ಸರ್ಕಾರದ ಮುಂದೆ ಇರುವುದಿಲ್ಲ.

ದೇವನಹಳ್ಳಿಯ ತೂಬಗೆರೆಯಲ್ಲಿ ಉಪ ಪೊಲೀಸ್ ಠಾಣೆ ಪ್ರಾರಂಭ

250 (314) ಶ್ರೀ ವೆಂಕಟಸ್ವಾಮಿ (ದೇವನಹಳ್ಳಿ) : ಮಾನ್ಯ ಗೃಹ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ದೇವನಹಳ್ಳಿ ವಿಧಾನಸಭಾ ಕ್ಷೇತ್ರಕ್ಕೆ ಸೇರಿರುವ ತೂಬಗೆರೆ ಹೋಬಳಿಗೆ ಉಪ ಪೊಲೀಸ್ ಠಾಣೆಯನ್ನು ಪ್ರಾರಂಭ ಮಾಡುವ ಉದ್ದೇಶ ಸರ್ಕಾರಕ್ಕೆ ಇದೆಯೇ;

ಆ) ಹಾಗಿದ್ದಲ್ಲಿ, ಯಾವಾಗ ಪ್ರಾರಂಭ ಮಾಡಲಾಗುವುದು?

ಡಾ॥ ವಿ.ಎಸ್.ಆಚಾರ್ಯ (ಗೃಹ ಸಚಿವರು) :

ಅ) ದೊಡ್ಡಬಳ್ಳಾಪುರ ಗ್ರಾಮಾಂತರ ಪೊಲೀಸ್ ಠಾಣೆ ಸರಹದ್ದಿನ ತೂಬಗೆರೆ ಹೋಬಳಿಯ ಎಸ್.ಎಸ್.ಘಾಟಿ ಗ್ರಾಮದಲ್ಲಿ ಈಗಾಗಲೇ ಒಂದು ಪೊಲೀಸ್ ಹೊರಠಾಣೆ ಕಾರ್ಯನಿರ್ವಹಿಸುತ್ತಿದ್ದು, ಎಸ್.ಎಸ್.ಘಾಟಿ ಗ್ರಾಮವು ತೂಬಗೆರೆ ಹೋಬಳಿಯ ವ್ಯಾಪ್ತಿಯಲ್ಲಿರುವುದರಿಂದ ಈ ಗ್ರಾಮದಲ್ಲಿ ಮತ್ತೊಂದು ಪೊಲೀಸ್ ಹೊರಠಾಣೆ ತೆರೆಯುವ ಅವಶ್ಯಕತೆ ಇರುವುದಿಲ್ಲ.

ಆ) ಉದ್ಭವಿಸುವುದಿಲ್ಲ.

ದೇವನಹಳ್ಳಿ ಕ್ಷೇತ್ರದಲ್ಲಿ ಕುಡಿಯುವ ನೀರಿನ ಸಮಸ್ಯೆ

251 (315) ಶ್ರೀ ವೆಂಕಟಸ್ವಾಮಿ (ದೇವನಹಳ್ಳಿ) : ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳ ಮತ್ತು ಸಾರ್ವಜನಿಕ ಉದ್ಯಮಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ದೇವನಹಳ್ಳಿ ತಾಲ್ಲೂಕು ಬಿಟ್ಟುಕೋಟೆ ಗ್ರಾಮದ ಕೆರೆಯಿಂದ ದೇವನಹಳ್ಳಿ ಪಟ್ಟಣಕ್ಕೆ ಕುಡಿಯುವ ನೀರಿನ ಯೋಜನೆಯನ್ನು ಪ್ರಾರಂಭಿಸುವ ಉದ್ದೇಶ ಸರ್ಕಾರಕ್ಕೆ ಇದೆಯೇ;

ಆ) ಹಾಗಿದ್ದಲ್ಲಿ, ಕಾಮಗಾರಿಯನ್ನು ಯಾವಾಗ ಪ್ರಾರಂಭಿಸ ಲಾಗುವುದು ಮತ್ತು ಈ ಕಾಮಗಾರಿಯನ್ನು ಪೂರ್ಣಗೊಳಿಸಲು ಎಷ್ಟು ಸಮಯ ಬೇಕಾಗುವುದು;

ಇ) ದೇವನಹಳ್ಳಿ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಗೆ ಬರುವ ದೇವನಹಳ್ಳಿ ಹಾಗೂ ವಿಜಯಪುರ ಪುರಸಭೆಗಳಿಗೆ ಸುಸಜ್ಜಿತ ತರಕಾರಿ ಮತ್ತು ಮಾಂಸದ ಮಾರುಕಟ್ಟೆ ಪ್ರಾರಂಭಿಸುವ ಉದ್ದೇಶ ಸರ್ಕಾರಕ್ಕೆ ಇದೆಯೇ;

ಈ) ಹಾಗಿದ್ದಲ್ಲಿ, ಯಾವಾಗ ಪ್ರಾರಂಭಿಸಲಾಗುವುದು;

ಶ್ರೀ ಬಾಲಚಂದ್ರ ಲಕ್ಷ್ಮಣರಾವ್ ಜಾರಕಿ ಹೊಳಿ (ಪೌರಾಡಳಿತ, ಸ್ಥಳೀಯ ಸಂಸ್ಥೆಗಳ ಮತ್ತು ಸಾರ್ವಜನಿಕ ಉದ್ಯಮಗಳ ಸಚಿವರು) :

ಅ) – ಹೌದು –

ಆ) ಪ್ರಸಾವನೆಯನ್ನು ದಿನಾಂಕ:02.03.2010 ರಂದು ಪುರಸಭೆಯ ಸಾಮಾನ್ಯ ಸಭೆಯಲ್ಲಿ ಅನುಮೋದಿಸಲಾಗಿರುತ್ತದೆ. ಅದರಂತೆ ಯೋಜನೆಯ ಸರ್ವೆ ಕಾರ್ಯಕ್ಕಾಗಿ ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯು ನಿಗದಿಪಡಿಸಿದ ಮೊತ್ತವನ್ನು ಸ್ಥಳೀಯ ಸಂಸ್ಥೆಯು